# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಹಾಸನ ಜಿಲ್ಲೆ, ಬೇಲೂರು ತಾಲ್ಲೂಕಿನ ಕೋಗೋಡು – ಬೊಮ್ಮೆನಹಳ್ಳಿಯಿಂದ ಟಿ-17 ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ಕಳಪೆಯಾಗಿ ನಿರ್ವಹಿಸಿ ಕರ್ತವ್ಯ ಲೋಪವೆಸಗಿರುವ ಅಧಿಕಾರಿ / ನೌಕರರ ಇವರ ವಿರುದ್ಧ ಇಲಾಖಾ ವಿಚಾರಣೆ – ವಿಚಾರಣಾಧಿಕಾರಿಗಳನ್ನು ನೇಮಿಸುವ ಬಗ್ಗೆ – ಆದೇಶ.

ಓದಲಾಗಿದೆ.

1. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂರು ಇವರ ಪತ್ರ ಸಂಖ್ಯೆ ಸಂಖ್ಯೆ ಕೆಆರ್‌ಆರ್‌ಡಿಎ /ತಾಂತ್ರಿಕ /ಎ.ಇ.14 /221/ 2014-15 ದಿನಾಂಕ 06.08.2014.

2. ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 80 ಇಎನ್‌ಕ್ಯೂ 2014 ದಿನಾಂಕ 13.10.2014.

3. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂರು ಇವರ ಪತ್ರ ಸಂಖ್ಯೆ ಸಂಖ್ಯೆ ಕೆಆರ್‌ಆರ್‌ಡಿಎ /ತಾಂತ್ರಿಕ /ಎ.ಇ.14 /221/ 2014-15 ದಿನಾಂಕ 17.11.2014.

4. ದೋಷಾರೋಪಣಾ ಪಟ್ಟಿಯೊಂದಿಗೆ ಜಾರಿ ಮಾಡಿದ ಕಾರಣ ಕೇಳುವ ನೋಟೀಸ್ ಸಂಖ್ಯೆ. ಗ್ರಾಅಪ 80 ಇಎನ್‌ಕ್ಯೂ 2014 ದಿನಾಂಕ. 01.12.2014.

5. ಶ್ರೀ ಪಿ. ಶ್ರೀರಂಗರಾಜು, ಶ್ರೀ ಕೆ.ಸಿ.ಶ್ರೀನಿವಾಸಮೂರ್ತಿ, ಶ್ರೀ ಆರ್.ಎನ್.ಅಶ್ವಥನಾರಾಯಣ, ಶ್ರೀ ಹೆಚ್.ಜಿ.ಹೇಮಂತಕುಮಾರ್ ಮತ್ತು ಶ್ರೀ ಎ.ಎಸ್.ನಾಗರಾಜ್ ರವರುಗಳು ಸಲ್ಲಿಸಿರುವ ಲಿಖಿತ ಹೇಳಿಕೆ ದಿನಾಂಕ. 22.12.2014, 26.12.2014, 22.01.2015, 22.01.2015 ಮತ್ತು 31.12.2014.

*****

ಪ್ರಸ್ತಾವನೆ:

ಹಾಸನ ಜಿಲ್ಲೆ, ಬೇಲೂರು ತಾಲ್ಲೂಕಿನ ಕೋಗೋಡು – ಬೊಮ್ಮೆನಹಳ್ಳಿಯಿಂದ ಟಿ-17 ರಸ್ತೆ ಅಭಿವೃದ್ಧಿ ಮತ್ತು ಡಾಂಬರೀಕರಣ ಕಾಮಗಾರಿಯನ್ನು ಕಳಪೆ ಗುಣಮಟ್ಟದಲ್ಲಿ ಅನುಷ್ಠಾನಗೊಳಿಸಿರುವ ಬಗ್ಗೆ ಗ್ರಾಮಸ್ಥರಿಂದ ದೂರು ಸ್ವೀಕೃತವಾದ ಹಿನ್ನೆಲೆಯಲ್ಲಿ ರಾಜ್ಯ ಗುಣ ನಿಯಂತ್ರಣ ಮಾನಿಟರ್, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂರು ಇವರು ಸ್ಥಳಪರಿಶೀಲನೆ / ತಪಾಸಣೆ ನಡೆಸಿ ಸಲ್ಲಿಸಿದ್ದ ದಿನಾಂಕ 07.06.2014ರಂದು ತನಿಖಾ

ವರದಿಯನ್ನು ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂರು ರವರು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 17.11.2014ರ ಪತ್ರದ ಜೊತೆ ಲಗತ್ತಿಸಿ ಕಳುಹಿಸಿ ಸದರಿ ಪ್ರಕರಣದಲ್ಲಿ ಭಾಗಿಯಾಗಿರುವ ಅಧಿಕಾರಿ / ನೌಕರರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಸಲ್ಲಿಸಿದ್ದ ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿ, ಸದರಿ ಕಾಮಗಾರಿಯನ್ನು ಕಳಪೆ ಗುಣಮಟ್ಟದಲ್ಲಿ ಅನುಷ್ಠಾನಗೊಳಿಸಿ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟಾಗಲು ಕಾರಣರಾದ ಈ ಕೆಳಕಂಡ ಅಧಿಕಾರಿಗಳ ವಿರುದ್ಧದ ಇಲಾಖಾ ವಿಚಾರಣೆ ಬಾಕಿ ಇರಿಸಿ ಅವರುಗಳನ್ನು ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ 13.10.2014ರ ಆದೇಶದಲ್ಲಿ ಸೇವೆಯಿಂದ ಅಮಾನತ್ತುಪಡಿಸಲಾಗಿತ್ತು:-

1. ಶ್ರೀ ಕೆ.ಸಿ.ಶ್ರೀನಿವಾಸಮೂರ್ತಿ, ಅಂದಿನ ಕಾರ್ಯಪಾಲಕ ಇಂಜಿನಿಯರ್ ಯೋಜನಾ ವಿಭಾಗ, ಹಾಸನ.
2. ಶ್ರೀ ಎ.ಎಸ್.ನಾಗರಾಜ್, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಯೋಜನಾ ಉಪ ವಿಭಾಗ, ಹಾಸನ.
3. ಶ್ರೀ ಹೆಚ್.ಜಿ.ಹೇಮಂತಕುಮಾರ್, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಯೋಜನಾ ಉಪ ವಿಭಾಗ, ಚನ್ನರಾಯಪಟ್ಟಣ.

ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂರು ಇವರು ಸದರಿ ಪ್ರಕರಣದಲ್ಲಿ ಈ ಕೆಳಕಂಡ 5 ಜನ ಅಧಿಕಾರಿ / ನೌಕರರು ಭಾಗಿಯಾಗಿರುತ್ತಾರೆಂದು ತಿಳಿಸಿ, ಮೇಲೆ ಕ್ರಮ ಸಂಖ್ಯೆ (4)ರಲ್ಲಿ ಓದಲಾದ ದಿನಾಂಕ 17.11.2014ರಂದು ಪರಿಷ್ಕೃತ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿದ್ದರು:-

1. ಶ್ರೀ ಪಿ. ಶ್ರೀರಂಗರಾಜು, ಅಂದಿನ ಕಾರ್ಯಪಾಲಕ ಇಂಜಿನಿಯರ್, ಯೋಜನಾ ವಿಭಾಗ, ಹಾಸನ.
2. ಶ್ರೀ ಕೆ.ಸಿ.ಶ್ರೀನಿವಾಸಮೂರ್ತಿ, ಅಂದಿನ ಕಾರ್ಯಪಾಲಕ ಇಂಜಿನಿಯರ್ ಯೋಜನಾ ವಿಭಾಗ, ಹಾಸನ.
3. ಶ್ರೀ ಎ.ಎಸ್.ನಾಗರಾಜ್, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಯೋಜನಾ ಉಪ ವಿಭಾಗ, ಹಾಸನ.
4. ಶ್ರೀ ಹೆಚ್.ಜಿ.ಹೇಮಂತಕುಮಾರ್, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಯೋಜನಾ ಉಪ ವಿಭಾಗ, ಚನ್ನರಾಯಪಟ್ಟಣ.
5. ಶ್ರೀ ಅಶ್ವಥ್ ನಾರಾಯಣ, ಅಂದಿನ ಕಿರಿಯ ಇಂಜಿನಿಯರ್, ಯೋಜನಾ ಉಪ ವಿಭಾಗ, ಚನ್ನರಾಯಪಟ್ಟಣ.

ಸರ್ಕಾರವು ದೋಷಾರೋಪಣಾ ಪಟ್ಟಿಗಳನ್ನು ಪರಿಶೀಲಿಸಿ, ಮೇಲ್ಕಂಡ 5 ಜನ ಆಪಾದಿತರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಂತೆ ಇಲಾಖಾ ವಿಚಾರಣೆ ನಡೆಸಲು ತೀರ್ಮಾನಿಸಿ ಸದರಿಯವರುಗಳಿಗೆ ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ದಿನಾಂಕ 01.12.2014ರ ಕಾರಣ ಕೇಳುವ ನೋಟೀಸಿನೊಂದಿಗೆ ದೋಷಾರೋಪಣಾ ಪಟ್ಟಿಯನ್ನು ಜಾರಿಮಾಡಲಾಗಿತ್ತು.

ಸರ್ಕಾರದ ಕಾರಣ ಕೇಳುವ ನೋಟೀಸಿಗೆ ಪ್ರತಿಯಾಗಿ ಆಪಾದಿತರು ಮೇಲೆ ಕ್ರಮ ಸಂಖ್ಯೆ (5)ರಂತೆ ಸಲ್ಲಿಸಿರುವ ಲಿಖಿತ ಹೇಳಿಕೆಯಲ್ಲಿ ತಮ್ಮ ವಿರುದ್ಧ ಮಾಡಲಾಗಿರುವ ಆರೋಪಗಳನ್ನು ಅಲ್ಲಗಳೆದಿದ್ದು, ತಮ್ಮನ್ನು ಆರೋಪಮುಕ್ತರೆಂದು ಘೋಷಿಸಬೇಕೆಂದು ಕೋರಿರುತ್ತಾರೆ.

ಪ್ರಕರಣದಲ್ಲಿ ಭಾಗಿಯಾಗಿರುವ ಆಪಾದಿತರು ಹಾಸನ ಜಿಲ್ಲೆ, ಬೇಲೂರು ತಾಲ್ಲೂಕಿನ ಕೋಗೋಡು - ಬೊಮ್ಮೆನಹಳ್ಳಿಯಿಂದ ಟಿ-17 ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ಕಳಪೆಯಾಗಿ ನಿರ್ವಹಿಸಿ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟಾಗಲು ಕಾರಣರಾಗಿ ತೀವ್ರತರ ಕರ್ತವ್ಯಲೋಪವೆಸಗಿರುವ ಆರೋಪವು ಗಂಬೀರ ಸ್ವರೂಪದ್ದಾಗಿದ್ದು ಹಾಗೂ ಆರ್ಥಿಕ ನಷ್ಟದ ಪ್ರಸ್ತಾಪವಿರುವುದರಿಂದ ಸದರಿ ಆರೋಪಗಳ ಸತ್ಯಾಸತ್ಯತೆಯನ್ನು ಅರಿಯುವ ಸಲುವಾಗಿ ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸುವುದು ಸೂಕ್ತವೆಂದು ಸರ್ಕಾರವು ನಿರ್ಧರಿಸಿದೆ. ಆದ್ದರಿಂದ ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ : ಗ್ರಾಅಪ 80 ಇಎನ್‌ಕ್ಯೂ 2014 ಬೆಂಗಳೂರು, ದಿನಾಂಕ. 18.10.2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಈ ಕೆಳಕಂಡ ಅಧಿಕಾರಿ / ನೌಕರರುಗಳ ವಿರುದ್ಧದ ಆರೋಪಗಳ ಬಗ್ಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರನ್ವಯ ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸಲು ಶ್ರೀ ಎಸ್.ವೈ.ಕುಂಬಾರ್, ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, ಬೆಂಗಳೂರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ಮತ್ತು ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಹಾಸನ ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿದೆ:-

1. ಶ್ರೀ ಪಿ.ಶ್ರೀರಂಗರಾಜು, ಅಂದಿನ ಕಾರ್ಯಪಾಲಕ ಇಂಜಿನಿಯರ್, ಯೋಜನಾ ವಿಭಾಗ, ಹಾಸನ.
2. ಶ್ರೀ ಕೆ.ಸಿ.ಶ್ರೀನಿವಾಸಮೂರ್ತಿ, ಅಂದಿನ ಕಾರ್ಯಪಾಲಕ ಇಂಜಿನಿಯರ್ ಯೋಜನಾ ವಿಭಾಗ, ಹಾಸನ.
3. ಶ್ರೀ ಎ.ಎಸ್.ನಾಗರಾಜ್, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಯೋಜನಾ ಉಪ ವಿಭಾಗ, ಹಾಸನ.
4. ಶ್ರೀ ಹೆಚ್.ಜಿ.ಹೇಮಂತಕುಮಾರ್, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಯೋಜನಾ ಉಪ ವಿಭಾಗ, ಚನ್ನರಾಯಪಟ್ಟಣ.
5. ಶ್ರೀ ಅಶ್ವಥ್ ನಾರಾಯಣ, ಅಂದಿನ ಕಿರಿಯ ಇಂಜಿನಿಯರ್, ಯೋಜನಾ ಉಪ ವಿಭಾಗ, ಚನ್ನರಾಯಪಟ್ಟಣ.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣೆಯನ್ನು ಆದಷ್ಟು ತ್ವರಿತವಾಗಿ ಕೈಗೊಂಡು, ಸದರಿ ನಿಯಮಗಳ ನಿಯಮ 11(23) ರಂತೆ ವರದಿಯನ್ನು ಮೂರು ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸುವುದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮಾನುಸಾರ ನಿಗಧಿತ ಸಂಭಾವನೆಯನ್ನು ಮಂಜೂರು ಮಾಡಲಾಗುವುದು.

ಇಲಾಖಾ ವಿಚಾರಣೆಗೆ ಅವಶ್ಯವಿರುವ ಸಿಬ್ಬಂದಿ, ಲೇಖನ ಸಾಮಗ್ರಿ ಮತ್ತು ಸ್ಥಳಾವಕಾಶ ಒದಗಿಸುವಂತೆ ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂರು ಇವರಿಗೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿದ್ದೇಶ್ ಪೊತ್ತಲಕಟ್ಟೆ),
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು–ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕಪತ್ರ 1& 2) / (ಆಡಿಟ್)
2. ಸರ್ಕಾರಕ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.
3. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂರು
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ಸರ್ಕಲ್, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಕೆ.ಆರ್.ಸರ್ಕಲ್, ಬೆಂಗಳೂರು.
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾಸನ.
7. ಉಪ ನಿಬಂಧಕರು ವಿಚಾರಣೆಗಳು–5, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಶ್ರೀ ಎಸ್.ವೈ.ಕುಂಬಾರ್, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ನಂ. 394, 18ನೇ ಮೇನ್, 6ನೇ ಬ್ಲಾಕ್, ಕೋರಮಂಗಲ, ಬೆಂಗಳೂರು–95. (ಮೊಬೈಲ್ ಸಂಖ್ಯೆ. 9900245450)
9. ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಹಾಸನ – ಸಂಬಂಧಿಸಿದ ದಾಖಲೆಗಳನ್ನು ವಿಚಾರಣಾಧಿಕಾರಿಗಳಿಗೆ ಮಂಡಿಸಿ ವಿಚಾರಣೆ ಸುಗಮವಾಗಿ ನಡೆಸಲು ಕ್ರಮವಹಿಸಲು ಕೋರಿದೆ.
10. ಸಂಬಂಧಪಟ್ಟ ಅಧಿಕಾರಿ / ನೌಕರರುಗಳಿಗೆ – ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾಸನ ಇವರ ಮುಖಾಂತರ.
11. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, (ಸೇವೆಗಳು–ಎ & ಸಿ)
12. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
13. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಜಂಟಿ ಕಾರ್ಯದರ್ಶಿ (ಆಡಳಿತ) ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
14. ಮೇಲ್ವಿಚಾರಕರು, ಗಣಕಯಂತ್ರ ಕೋಶ, ಗ್ರಾ.ಅ.ಪಂ.ಇಲಾಖೆ, ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
15. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.